# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1020** |
| ಸದಸ್ಯರ ಹೆಸರು | : | ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 24-02-2023 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಮಧ್ಯ ಕರ್ನಾಟಕ ಚಿತ್ರದುರ್ಗ ಜಿಲ್ಲೆಯಲ್ಲಿ ಅತಿ ಹೆಚ್ಚು ಶೇಂಗಾ ಬೆಳೆಯನ್ನು ಬೆಳೆಯುತ್ತಿದ್ದು ಇದರ ಮೌಲ್ಯವರ್ಧನೆಗಾಗಿ ಕೃಷಿ ಇಲಾಖೆ ವತಿಯಿಂದ ಯಾವುದಾದರೂ ಯೋಜನೆಯನ್ನು ಜಾರಿಗೆ ತರಲಾಗಿದೆಯೇ; | ಶೇಂಗಾ ಬೆಳೆಯಲ್ಲಿ ಮೌಲ್ಯವರ್ಧನೆಗಾಗಿ ಪ್ರತ್ಯೇಕ ಯೋಜನೆಯನ್ನು ಜಾರಿಗೊಳಿಸಲಾಗಿರುವುದಿಲ್ಲ. ಆದರೆ ಎಣ್ಣೆಕಾಳು ಬೆಳೆಗಳಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಉದ್ದೇಶದಿಂದ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆಯನ್ನು ಚಿತ್ರದುರ್ಗ ಜಿಲ್ಲೆಯನ್ನೊಳಗೊಂಡಂತೆ, ರಾಜ್ಯದ 26 ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.<br><br>ಸದರಿ ಯೋಜನೆಯಡಿ ಎಣ್ಣೆಕಾಳು ಬೆಳೆಗಳಲ್ಲಿ ಶೇಂಗಾ ಬೆಳೆಯನ್ನು ಒಳಗೊಂಡಂತೆ ಸಂಪನ್ಮೂಲ ಸಂರಕ್ಷಣಾ ತಾಂತ್ರಿಕತೆಗಳ ಘಟಕದಡಿ ಮೌಲ್ಯವರ್ಧನೆಗಾಗಿ ಸಣ್ಣ ಪ್ರಮಾಣದ ಎಣ್ಣೆಗಾಣಗಳ (0.5 HP -2 HP ಸಾಮರ್ಥ್ಯ) ವಿತರಣೆ ಮಾಡಲಾಗುತ್ತದೆ.<br><br>ಇದಲ್ಲದೆ, ರಾಜ್ಯವಲಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ಆರ್.ಕೆ.ವಿ.ವೈ ಯೋಜನೆಗಳಡಿ ಸಹಾಯಧನದಲ್ಲಿ 10 ಹೆಚ್.ಪಿ ವರೆಗಿನ ಸಣ್ಣ ಯಂತ್ರ ಚಾಲಿತ ಎಣ್ಣೆ ಗಾಣಗಳನ್ನು ವಿತರಿಸಲಾಗುತ್ತಿದೆ. ಸದರಿ ಎಣ್ಣೆ ಗಾಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.75 ರಷ್ಟು ಹಾಗೂ ಪ.ಜಾ/ಪ.ಪಂ ವರ್ಗದ ರೈತರಿಗೆ ಶೇ.90 ರಷ್ಟು ಗರಿಷ್ಟ 1.00 ಲಕ್ಷದ ಮಿತಿಯೊಳಗೆ ಸಹಾಯಧನ ಒದಗಿಸಲಾಗುತ್ತಿದೆ.<br><br>ಅಲ್ಲದೆ, ಕೃಷಿ ಇಲಾಖೆಯ ಅಧೀನದ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆ ವತಿಯಿಂದ ಕೇಂದ್ರ ಪುರಸ್ಕೃತ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (PMFME) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ಶೇಂಗಾ ಬೆಳೆಯಲ್ಲಿ ವೈಯಕ್ತಿಕ ಉದ್ದಿಮೆದಾರರು ಹಾಗೂ ರೈತರ ಗುಂಪುಗಳು ಮೌಲ್ಯವರ್ಧಿತ ಉತ್ಪನ್ನಗಳನ್ನು ಉತ್ಪಾದಿಸಲು ಸಹಾಯಧನ ನೀಡಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಮೌಲ್ಯವರ್ಧನೆ ಹಾಗೂ ಸಂಸ್ಕರಣೆಗಾಗಿ ಶೇಂಗಾ ಬೆಳೆಯನ್ನು "ಒಂದು ಜಿಲ್ಲೆ ಒಂದು ಉತ್ಪನ್ನ" (ODOP) ಕಾರ್ಯಕ್ರಮದಡಿಯಲ್ಲಿ ಆಯ್ಕೆ ಮಾಡಲಾಗಿರುತ್ತದೆ. ಶೇಂಗಾ ಬೆಳೆಯಿಂದ ಎಣ್ಣೆ, ಕಡಲೆಕಾಯಿ ಬರ್ಫಿ, ಚಟ್ನಿಪುಡಿ, ಹೋಳಿಗೆ, ಸಹಿ ತಿಂಡಿಗಳು, ಪೀನಟ್ ಬಟರ್ ಈ ಮುಂತಾದ ಉತ್ಪನ್ನಗಳನ್ನು ತಯಾರಿಸಲು ಅವಕಾಶವಿರುತ್ತದೆ. |

| | | |
|---|---|---|
| ಆ) | ಶೇಂಗಾ ಬೆಳೆಯನ್ನು ಸಂಸ್ಕರಿಸಿ ವಿವಿಧ ಆಹಾರ ಪದಾರ್ಥಗಳು ಮತ್ತು ಎಣ್ಣೆ ಪದಾರ್ಥಗಳನ್ನು ತಯಾರಿಸಲು ಕೃಷಿ ಇಲಾಖೆ ಮತ್ತು ಎಂ.ಎಸ್.ಎಂ.ಇ ಸಣ್ಣ ಮಧ್ಯಮ ಕೈಗಾರಿಕೆ ಇಲಾಖೆ ವತಿಯಿಂದ "ಗ್ರೌಂಡ್ ನೆಟ್ ಕ್ಲಸ್ಟರ್" ಎಂದು ಘೋಷಿಸಲು ಸಾಧ್ಯವಿದೆಯೇ; | ಶೇಂಗಾ ಬೆಳೆಯನ್ನು ಸಂಸ್ಕರಿಸಿ ವಿವಿಧ ಆಹಾರ ಪದಾರ್ಥಗಳು ಮತ್ತು ಎಣ್ಣೆ ಪದಾರ್ಥಗಳನ್ನು ತಯಾರಿಸಲು ಕೇಂದ್ರ ಸರ್ಕಾರದ ಸೂಕ್ಷ್ಮ, ಸಣ್ಣ ಉದ್ದಿಮೆಗಳ ಕ್ಲಸ್ಟರ್ ಅಭಿವೃದ್ಧಿ (MSE-CDP) ಯೋಜನೆಯಡಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 'ಗ್ರೌಂಡ್‌ನಟ್ ಕ್ಲಸ್ಟರ್' ಅನ್ನು ಯೋಜನಾ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲು ಅವಕಾಶವಿದೆ. |
| ಇ) | ಕೇಂದ್ರ ಸರ್ಕಾರ ನೀಡುತ್ತಿರುವ ಈ ಅನುದಾನವನ್ನು ಈ ಯೋಜನೆಗೆ ನೀಡಿ ಉದ್ಯಮವನ್ನು ಪ್ರೋತ್ಸಾಹಿಸಬಹುದೇ? | ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯಡಿ (PMFME) ಎಲ್ಲಾ ಬೆಳೆಗಳ ಮೌಲ್ಯವರ್ಧನೆಗಾಗಿ ವಿಸ್ತೃತ ಯೋಜನಾ ವರದಿ (DPR) ಆಧರಿಸಿ ಉದ್ಯಮವನ್ನು ಪ್ರೋತ್ಸಾಹಿಸಲಾಗುತ್ತಿದೆ.<br><br>ಕೇಂದ್ರ ಸರ್ಕಾರದ ಸೂಕ್ಷ್ಮ, ಸಣ್ಣ ಉದ್ದಿಮೆಗಳ ಕ್ಲಸ್ಟರ್ ಅಭಿವೃದ್ಧಿ (MSE-CDP) ಯೋಜನೆಯ ಮಾರ್ಗಸೂಚಿಯನ್ವಯ 'ಗ್ರೌಂಡ್‌ನಟ್ ಕ್ಲಸ್ಟರ್' ಅನ್ನು ಕೇಂದ್ರ/ರಾಜ್ಯ ಸರ್ಕಾರದ ಅನುದಾನದೊಂದಿಗೆ ಪ್ರೋತ್ಸಾಹಿಸಬಹುದಾಗಿದೆ. |

*ಕೃಇ 24 ಎಎಂಎಸ್ 2023*

(ಬಿ.ಸಿ.ಪಾಟೀಲ್)
ಕೃಷಿ ಸಚಿವರು